ಮಾಡಿ ತಮ್ಮ ವಿವೇಚನೆಯ ಮೂಲಕ ಕೊಡುವ ತೀರ್ಮಾನಕ್ಕೆ ಬದ್ಧರಾಗಬೇಕು ಎಂದು ತೀರ್ಮಾನ ಮಾಡಿದ್ದೆವು. ಆದರೆ ಮಾನ್ಯ ರಾಯರೆಡ್ಡಿಯವರು ಈ ಅವಕಾಶವನ್ನು ಉಪಯೋಗಿಸಿಕೊಂಡು ಬಹಳ ದೀರ್ಘವಾಗಿ ಎಲ್ಲಾ ವಿಚಾರಗಳನ್ನು ಪ್ರಸ್ತಾಪ ಮಾಡಿದ್ದಾರೆ. ಅವರಿಗೆ ಮಾತನಾಡುವ ಹಕ್ಕಿದೆ, ಮಾತನಾಡಿದ್ದಾರೆ. ಅದರ ಬಗ್ಗೆ ಭಿನ್ನಾಭಿಪ್ರಾಯ ಏನೂ ಇಲ್ಲ. ಆದರೆ ಒಪ್ಪಂದದ ಪ್ರಕಾರ ನಾವು ನಡೆದುಕೊಳ್ಳಬೇಕಾಗಿತ್ತು ಎಂದು ಮಾತ್ರ ಹೇಳಲು ಬಯಸುತ್ತೇನೆ. ಸೌಜನ್ಯಕ್ಕಾದರೂ ಸರ್ಕಾರ ನಮ್ಮೊಡನೆ ಸಮಾಲೋಚಿಸಬೇಕಿತ್ತು ಎಂದು ಮಾನ್ಯ ಸದಸ್ಯರು ಪ್ರಸ್ತಾಪ ಮಾಡಿದರು. ಮೂರು ಜನ ಹಿರಿಯ ಸದಸ್ಯರು ಮಾತನಾಡುವ ಸಂದರ್ಭದಲ್ಲಿ ಕೂಡ ಅದನ್ನು ಹೇಳಿದರು. ಮತ್ತೊಂದು ಕಡೆಗೆ ಸೌಜನ್ಯದಿಂದ ಜಿಲ್ಲಾಧಿಕಾರಿಗಳು ಇಂತಹ ಏರ್ಪಾಡುಗಳನ್ನು ಮಾಡಿದ್ದೇವೆ ಎಂದು ಹೇಳಿದರೆ, ಬೆಳಗಾವಿ ಉಸ್ತುವಾರಿ ಸಚಿವರು ಸೌಜನ್ಯಕ್ಕಾಗಿ ಒಂದು ಪೂರ್ವಭಾವಿ ಸಭೆಯನ್ನು ಕರೆದಿದ್ದೇನೆ ಎಂದು ಹೇಳಿದರೆ, ಅದನ್ನು ಸಂವಿಧಾನ ಬಾಹಿರ ಕ್ರಮ ಎಂದು ಹೇಳುವುದಾದರೆ ನನಗೆ ಬಹಳ ಆಶ್ಚರ್ಯವಾಗುತ್ತದೆ. It is something like a pernicious argument ಎಂದು ಹೇಳಬೇಕಾಗುತ್ತದೆ.

3. ವಿತ್ತೀಯ ಕಾರ್ಯಕಲಾಪಗಳು:

2006-07ನೇ ಸಾಲಿನ ಪೂರಕ ಅಂದಾಜು (ಒಂದನೇ ಕಂತು) ಮಂಡನೆ.

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, ದಿನಾಂಕ 31.03.2007ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆಗಳ ಕ್ರಮಾಂಕ 1ರಿಂದ 5, 7ರಿಂದ 15, 17ರಿಂದ 24 ಹಾಗೂ 26ರಿಂದ 28ಕ್ಕೆ ಸಂಬಂಧಿಸಿದಂತೆ ಸಂದಾಯವಾಗುವ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಹಾಗೂ ಈ ಬಂಡವಾಳ ಖಾತೆಯಲ್ಲಿ ಮಂಜೂರಾದ ಮತ್ತು ಅದನ್ನು ಭರಿಸಲು ಪೂರಕ ಅಂದಾಜುಗಳಲ್ಲಿ ಸೇರಿಸಲಾದ ಬೇಡಿಕೆಗಳ ಪಟ್ಟಿಯಲ್ಲಿ ನಮೂದಿಸಲಾದ ಮೊಬಲಗಿಗೆ ಮೀರದ ಮೊತ್ತವನ್ನು ಈ ಸಭೆಯು ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಪ್ರಸ್ತಾವ ಮಂಡಿಸಲ್ಪಟ್ಟಿತು.

ಅಧ್ಯಕ್ಷರು : ವಿವರಣೆ ನೀಡಿ.

ಶ್ರೀ ಜೆ.ಎ. ಶ್ರೀರಾಮರೆಡ್ಡಿ : ಅಧ್ಯಕ್ಷರೇ, ಅದಕ್ಕೂ ಮೊದಲು ನಮ್ಮದು ಒಂದು ಹಕ್ಕುಚ್ಯುತಿ ಪ್ರಸ್ತಾವ ಇದೆ.

4. ಹಕ್ಕುಚ್ಯುತಿ ಪ್ರಸ್ತಾವ

ವಿಷಯ: ಬೆಳಗಾವಿ ಅಧಿವೇಶನದ ಬಗ್ಗೆ.

ಶ್ರೀ ಜೆ.ಎ. ಶ್ರೀರಾಮರೆಡ್ಡಿ : Privilege Motion ಹಾಗೆಯೇ ಇಟ್ಟುಕೊಂಡು ಎಲ್ಲಾ ಕಾರ್ಯಕಲಾಪ ಪ್ರಾರಂಭ ಮಾಡಿದರೆ ಹೇಗೆ?